733 (548) ಶ್ರೀ ಶಂಕರರಾವ್ ನಾಡಗೌಡ (ಮುದ್ದೇಬಿಹಾಳ): ಮಾನ್ಯ ಯೋಜನೆ, ಸಣ್ಣ ಉಳಿತಾಯ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಡಾ: ನಂಜುಂಡಪ್ಪನವರ ವರದಿಯನ್ವಯ ರಾಜ್ಯದಲ್ಲಿರುವ ಹಿಂದುಳಿದ ತಾಲ್ಲೂಕುಗಳ ಅಭಿವೃದ್ಧಿಗಾಗಿ ಸರ್ಕಾರವು ಕೈಗೊಂಡ ಕ್ರಮಗಳಾವುವು ;

ಆ) ಹಿಂದುಳಿದ ತಾಲ್ಲೂಕುಗಳ ಅಭಿವೃದ್ಧಿಗಾಗಿ ಕ್ರಿಯಾ ಯೋಜನೆಯನ್ನು ಸರ್ಕಾರ ತಯಾರಿಸಲಾಗಿದೆಯೇ ; (ವಿವರ ನೀಡುವುದು) ?

ಶ್ರೀ ರಾಮಚಂದ್ರಗೌಡ (ಯೋಜನಾ ಸಚಿವರು, ಸಣ್ಣ ಉಳಿತಾಯ ಹಾಗೂ ವಿಜ್ಞಾನ ತಂತ್ರಜ್ಞಾನ ಸಚಿವರು):

ಅ) ಪ್ರಾದೇಶಿಕ ಅಸಮತೋಲನ ನಿವಾರಣ ಉನ್ನತಾಧಿಕಾರ ಸಮಿತಿಯು 114 ತಾಲ್ಲೂಕುಗಳನ್ನು ಅತ್ಯಂತ ಹಿಂದುಳಿದ ಅತೀ ಹಿಂದುಳಿದ ಹಾಗೂ ಹಿಂದುಳಿದ ತಾಲ್ಲೂಕುಗಳೆಂದು ಗುರುತಿಸಿ ಈ ತಾಲ್ಲೂಕುಗಳ ಅಭಿವೃದ್ಧಿಗೆ 16 ಸಾವಿರ ಕೋಟಿ ರೂ.ಗಳ ವಿಶೇಷ ಅಭಿವೃದ್ಧಿ ಯೋಜನೆಯನ್ನು ಸಿದ್ದಪಡಿಸಲು ಶಿಫಾರಸ್ಸು ಮಾಡಿದೆ. ಇದರ ಪೈಕಿ ಉತ್ತರ ಕರ್ನಾಟಕ ಪ್ರದೇಶಾಭಿವೃದ್ಧಿಗಾಗಿ ಬೇಕಾಗುವ ಹಣವು 9600 ಕೋಟಿ ರೂ.ಗಳು ರಾಜ್ಯ ಸರ್ಕಾರವು ಇದರ ಕಡೆಯ ಪಕ್ಷ ಶೇ. 50ರಷ್ಟು ಹಣದ ಸಹಾಯ ಮಾಡಲು ಕೇಂದ್ರ ಸರ್ಕಾರಕ್ಕೆ ಕೋರಿದೆ. ಇದರ ಬಗ್ಗೆ ಭಾರತ ಸರ್ಕಾರದಿಂದ ಉತ್ತರವನ್ನು ನಿರೀಕ್ಷಿಸಲಾಗಿದೆ. ಆದರೂ ಈ ತಾಲ್ಲೂಕುಗಳ ಅಭಿವೃದ್ಧಿಗೆ ರಾಜ್ಯ ಹಾಗೂ ಜಿಲ್ಲಾ ವಲಯ ಯೋಜನೆಗಳಿಂದ ಹಣವನ್ನು ಒದಗಿಸಲಾಗುತ್ತಿದೆ.

ಆ) ಈ ತಾಲ್ಲೂಕುಗಳಿಗೆ ಕ್ರಿಯಾ ಯೋಜನೆಯನ್ನು ತಯಾರಿಸಲು ಕ್ರಮ ಕೈಗೊಳ್ಳಲಾಗಿದೆ.

734 (749) ಶ್ರೀ ಎ.ಬಿ. ಪಾಟೀಲ್ (ಸಂಕೇಶ್ವರ): ಮಾನ್ಯ ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲ್ಲೂಕಿನ ಸಂಕೇಶ್ವರ ವ್ಯಾಪ್ತಿಯಲ್ಲಿ ಬರುವ ರೈತರ ಹೊಲಗಳಿಗೆ ಕಾಡಾನೆಗಳು ಇತ್ತೀಚೆಗೆ ದಾಳಿ ನಡೆಸಿ ಬೆಳೆ ಹಾನಿ ಮಾಡಿದ್ದಲ್ಲದೆ ಇಬ್ಬರು ರೈತರು ಆನೆಗಳ ಕಾಲ್ತುಳಿತಕ್ಕೆ ಸಿಕ್ಕಿ ಸತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಬಂದಿದ್ದಲ್ಲಿ, ರೈತರ ಬೆಳೆಹಾನಿಗೆ ಪರಿಹಾರ ನೀಡಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ ;

ಇ) ಮೃತ ರೈತರ ಕುಟುಂಬಕ್ಕೆ ಸರ್ಕಾರದಿಂದ ಎಷ್ಟು ಪರಿಹಾರ ನೀಡಲಾಗಿದೆ ;

ಈ) ಮಹಾರಾಷ್ಟ್ರ ಸರ್ಕಾರ ಆನೆ ತುಳಿತಕ್ಕೆ ಸಿಕ್ಕಿ ಸತ್ತವರ ಕುಟುಂಬಕ್ಕೆ ನೀಡುತ್ತಿರುವ ರೂ. 2 ಲಕ್ಷಗಳ ಪರಿಹಾರ ಮೊತ್ತವನ್ನು ಇಲ್ಲಿ ಮೃತರಾದ ಕುಟುಂಬದವರಿಗೂ ಸಹ ನೀಡಲಾಗುವುದೇ ;

ಉ) ಕಾಡಾನೆಗಳನ್ನು ಹಿಡಿಯಲು ಸರ್ಕಾರ ಯಾವ ಯೋಜನೆ ಹಾಕಿಕೊಂಡಿದೆ ;

ಊ) ಹಾಗಿದ್ದಲ್ಲಿ, ಆನೆಗಳನ್ನು ಹಿಡಿಯಲು ಸರ್ಕಾರ ವಿಫಲವಾಗಿರುವುದಕ್ಕೆ ಕಾರಣಗಳೇನು ?

ಶ್ರೀ ಚೆನ್ನಿಗಪ್ಪ (ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು):

ಅ) ಹೌದು.

ಆ) ಬೆಳಗಾವಿ ಜಿಲ್ಲೆಯಲ್ಲಿ ಇಲ್ಲಿಯವರೆಗೆ 67 ಪ್ರಕರಣಗಳ ಪೈಕಿ 58 ಪ್ರಕರಣಗಳಿಗೆ ಸರ್ಕಾರದ ಆದೇಶ ದಿನಾಂಕ: 12–02–2002ರ ಪ್ರಕಾರ ಪರಿಹಾರ ಧನ ರೂ. 82,680/– ಪಾವತಿಸಿದ್ದು ಇನ್ನುಳಿದ 9 ಪ್ರಕರಣಗಳಲ್ಲಿ ಅಗತ್ಯ ದಾಖಲೆಗಳನ್ನು ಪೂರೈಸಲು ಸೂಚಿಸಿದೆ.

ಇ) ಬೆಳಗಾವಿ ಜಿಲ್ಲೆಯಲ್ಲಿ ಕಾಡಾನೆ ದಾಳಿಗೆ 2 ಮಂದಿ ಮೃತಪಟ್ಟಿದ್ದು ಸರ್ಕಾರದ ಆದೇಶ ದಿನಾಂಕ: 12–02–2002ರ ಪ್ರಕಾರ ತಲಾ ರೂ. 1.00 ಲಕ್ಷ ಪರಿಹಾರ ಧನ ಪಾವತಿಸಲಾಗಿದೆ.

ಈ) ಮಾನವ ಪ್ರಾಣಹಾನಿ ಪ್ರಕರಣಗಳಿಗೆ ಸಂಬಂಧಿಸಿದಂತೆ ಸರ್ಕಾರಿ ಆದೇಶ ದಿನಾಂಕ: 12–2–2002ರನ್ವಯ ರೂ. 1.00 ಲಕ್ಷಗಳ ಪರಿಹಾರವನ್ನು ನೀಡಲಾಗುತ್ತಿದ್ದಿತು. ಈಗ ಈ ಮೊತ್ತವನ್ನು ದಿನಾಂಕ: 17/1/07ರ ಸರ್ಕಾರಿ ಆದೇಶದಲ್ಲಿ ರೂ. 1.50 ಲಕ್ಷಗಳಿಗೆ ಹೆಚ್ಚಿಸಲಾಗಿದೆ.

ಉ) ಕಾಡಾನೆಗಳನ್ನು ಹಿಡಿಯಲು ಯಾವುದೇ ಯೋಜನೆಯನ್ನು ರೂಪಿಸಿರುವುದಿಲ್ಲ. ಆದರೆ ಕಾಡಾನೆ ಹಾವಳಿಯನ್ನು ತಡೆಯಲು ಹಾಗೂ ಅವುಗಳನ್ನು ಕಾಡಿಗೆ ಓಡಿಸಲು ಕ್ರಮ ತೆಗೆದುಕೊಂಡು ನಿಯಂತ್ರಿಸಲಾಗುತ್ತಿದೆ.

ಊ) ಬೆಳಗಾವಿ ಜಿಲ್ಲೆಯಲ್ಲಿ ಅನೆಗಳ ಹಾವಳಿ ನಿಯಂತ್ರಣದಲ್ಲಿರುವುದರಿಂದ ಅವುಗಳನ್ನು ಹಿಡಿಯುವ ಅವಶ್ಯಕತೆ ಕಂಡುಬಂದಿಲ್ಲ.

735 (1145) ಶ್ರೀ ಅಶೋಕ ಗುರಪ್ಪ ಶಾಬಾದಿ (ಸಿಂಧಗಿ): ಮಾನ್ಯ ಸಣ್ಣ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬಿಜಾಪುರ ಜಿಲ್ಲೆ ಸಿಂಧಗಿ ತಾಲ್ಲುಕಿನಲ್ಲಿ ಕೈಗಾರಿಕಾ ವಿಕಾಸ ಯೋಜನೆಯಡಿ ಕೈಗಾರಿಕಾ ವಸಾಹತು ಸ್ಥಾಪನೆ ಮಾಡಲು ಸರ್ಕಾರ ನಿರ್ಧರಿಸಲಾಗಿದೆಯೇ ;

ಆ) ಹಾಗಿದ್ದಲ್ಲಿ, ಸರ್ಕಾರ ಇದಕ್ಕಾಗಿ ವಶಪಡಿಸಿಕೊಂಡಿರುವ ಭೂಮಿಯ ವಿಸ್ತೀರ್ಣವೆಷ್ಟು ;

ಇ) ಕೈಗಾರಿಕಾ ವಸಾಹತು ನಿರ್ಮಾಣ ಯೋಜನೆ ಈಗ ಯಾವ ಹಂತದಲ್ಲಿದೆ ಹಾಗೂ ಯಾವಾಗ ಪೂರ್ಣಗೊಳ್ಳಲಿದೆ ;